# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 2876
ಸದಸ್ಯರ ಹೆಸರು : ಶ್ರೀ ಕೆ.ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 30.03.2022.
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ರೈತರು ಬಳಸುತ್ತಿರುವ ಕುಮ್ಕಿ ಹಕ್ಕನ್ನು ರೈತರಿಗೆ ನೀಡುವ ಯೋಜನೆ ಸರ್ಕಾರದ ಮುಂದಿದೆಯೇ; | ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ ಕಲಂ 79(2)ರಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ ಕುಮ್ಕಿ ಭೂಮಿಗಳು, ಬಾಣೆ ಭೂಮಿಗಳು ಮತ್ತು ಕಾಣೆ ಭೂಮಿಗಳು, ಉತ್ತರ ಕನ್ನಡ ಜಿಲ್ಲೆಯಲ್ಲಿನ ಬೆಟ್ಟ ಭೂಮಿಗಳು ಮತ್ತು ಹಾಡಿ ಭೂಮಿಗಳು, ಮೈಸೂರು ಪ್ರದೇಶದಲ್ಲಿನ ಕಾನು ಮತ್ತು ಸೊಪ್ಪಿನ ಬೆಟ್ಟ ಭೂಮಿಗಳು, ಕೊಡಗಿನ ಜಮ್ಮಾ ಮತ್ತು ಬಾಣೆ ಭೂಮಿಗಳು ಮತ್ತು ಹೈದರಬಾದ್ ಪ್ರದೇಶದಲ್ಲಿನ (ಮೋಟಸ್ಥಲ್ ತರಿ ಭೂಮಿಗಳು) (Motasthal wet lands) ಇವುಗಳ ಬಗೆಗಿನ ವಿಶೇಷಾಧಿಕಾರಗಳು ಮುಂದುವರಿಯತಕ್ಕದ್ದು ಎಂದು ತಿಳಿಸಲಾಗಿದೆ.<br><br>ಮಾನ್ಯ ಕಂದಾಯ ಸಚಿವರ ಅಧ್ಯಕ್ಷತೆಯಲ್ಲಿ ಗೋಮಾಳ, ಗಾಯರಾಣ, ಹುಲ್ಲುಬನ್ನಿ, ಸೊಪ್ಪಿನಬೆಟ್ಟ ಇತ್ಯಾದಿ ಗ್ರಾಮೀಣ ಪ್ರದೇಶದ ಜಮೀನುಗಳನ್ನು ಮಂಜೂರು ಮಾಡುವ ಕುರಿತು ಒಂದು ನೀತಿಯನ್ನು ರೂಪಿಸಲು ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲಾಗಿದೆ. |
| ಆ) | ಡೀಮ್ಡ್ ಅರಣ್ಯದಿಂದಾಗಿ ಕುಮ್ಕಿ ಹಕ್ಕು ನೀಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು; ಈ ಕುರಿತಂತೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ಒದಗಿಸುವುದು) | |

ಸಂಖ್ಯೆ: ಆರ್‌ಡಿ 146 ಎಲ್‌ಜಿಕ್ಯೂ 2022

(ಆರ್.ಅಶೋಕ)
ಕಂದಾಯ ಸಚಿವರು